## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಸಾಮಾಜಿಕವಾಗಿ ಮುಂದುವರೆದ ವ್ಯಕ್ತಿಗಳು/ವರ್ಗಗಳನ್ನು(ಕೆನೆಪದರ) ಹಿಂದುಳಿದ ವರ್ಗಗಳ ಮೀಸಲಾತಿಯಿಂದ ಹೊರತುಪಡಿಸಲು ಕೆನೆಪದರ ನೀತಿಯ ವಾರ್ಷಿಕ ಆದಾಯ ಮಿತಿಯನ್ನು ರೂ. 6.00 ಲಕ್ಷಗಳಿಂದ ರೂ.8.00 ಲಕ್ಷಗಳಿಗೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ :**
1. ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿ:30.03.2002.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 104 ಬಿಸಿಎ 2011, ದಿ:06.02.2012.
3. ಸರ್ಕಾರದ ಆದೇಶ ಸಂಖ್ಯೆ: ಸಕಇ 192 ಬಿಸಿಎ 2013, ದಿ:04.09.2013.
4. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿ:04.06.2015.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಮಾಶಾ/ಸಿ.ಆರ್-89/2017-18, ದಿ:12.03.2018.

**********

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದ ಆದೇಶದ ಅನುಬಂಧ II ಅಂಶ-3ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2'ಎ', 2'ಬಿ', 3'ಎ' ಮತ್ತು 3'ಬಿ' ಗಳಿಗೆ ಅನ್ವಯಿಸುವಂತೆ ವಾರ್ಷಿಕ ಆದಾಯ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗಧಿಗೊಳಿಸಲಾಗಿದೆ. ತದನಂತರ ಒಟ್ಟು ವಾರ್ಷಿಕ ಆದಾಯ ಮಿತಿಯನ್ನು (Gross Annual Income) ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ ರೂ.2.00 ಲಕ್ಷಗಳಿಂದ ರೂ.3.50 ಲಕ್ಷಗಳಿಗೆ ನಿಗಧಿಗೊಳಿಸಿದೆ ಹಾಗೂ ಮೇಲೆ (3)ರಲ್ಲಿ ಓದಲಾದ ಆದೇಶದಲ್ಲಿ ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಮತ್ತು (4)ರಲ್ಲಿ ಓದಲಾದ ಆದೇಶದಲ್ಲಿ ರೂ.4.50 ಲಕ್ಷಗಳಿಂದ ರೂ.6.00 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ದಿ:16.02.2018 ರಂದು, ಅಂದಿನ ಸನ್ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-194ರಲ್ಲಿ "ಹಿಂದುಳಿದ ವರ್ಗಗಳು ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಪಡೆಯಲು ಹಾಲಿ ಇರುವ ಕೆನೆಪದರ ಆದಾಯ ಮಿತಿಯನ್ನು ರೂ.6.00 ಲಕ್ಷಗಳಿಂದ ರೂ. 8.00 ಲಕ್ಷಗಳಿಗೆ ಹೆಚ್ಚಿಸಲಾಗುವುದು" ಎಂದು ಘೋಷಿಸಿರುತ್ತಾರೆ. ಅದರಂತೆ ಮೇಲೆ (5)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಈ ಬಗ್ಗೆ ಆದೇಶ ಹೊರಡಿಸುವಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸರ್ಕಾರಕ್ಕೆ ಕೋರಿರುತ್ತಾರೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017, ದಿ:14.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿ:30.03.2002 ಅನುಬಂಧ-IIರ ಅಂಶ-3ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2'ಎ', 2'ಬಿ', 3'ಎ' ಮತ್ತು 3'ಬಿ'ಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗಧಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ-ತಾಯಿ/ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ.6.00 ಲಕ್ಷಗಳಿಂದ ರೂ.8.00 ಲಕ್ಷಗಳಿಗೆ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಹೆಚ್ಚಿಸಿ ಆದೇಶಿಸಿದೆ.

ಪು.ತಿ.ನೋ...2

ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿ:30.03.2002ರಲ್ಲಿರುವ ಇತರೆ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 441 ವೆಚ್ಚ–3/2018, ದಿ:02.08.2018 ಮತ್ತು ಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 16 ಐಎಂಎಂ 2018, ದಿನಾಂಕ:13.04.2018ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಸ್.ಎನ್.ಕಲಾವತಿ
(ಎಸ್.ಎನ್. ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಯವರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ ಇವರಿಗೆ ಕಳುಹಿಸಲು ಕೋರಿದೆ.

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ! ಆಯುಕ್ತರ ಮುಖೇನಾ
8. ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ! ಆಯುಕ್ತರ ಮುಖೇನಾ
9. ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ).
10. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.
11. ಎಲ್ಲಾ ಜಿಲ್ಲೆಯ ಉಪ ವಿಭಾಗಗಳ ಸಹಾಯಕ ಆಯುಕ್ತರು ! ಆಯುಕ್ತರ ಮುಖೇನಾ
12. ಎಲ್ಲಾ ತಾಲ್ಲೂಕು ತಹಶೀಲ್ದಾರರುಗಳು ! ಆಯುಕ್ತರ ಮುಖೇನಾ
13. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ! ಆಯುಕ್ತರ ಮುಖೇನಾ
14. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
16. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು.
17. ಸರ್ಕಾರದ ಅಧೀನ ಕಾರ್ಯದರ್ಶಿ–1ರವರ ಆಪ್ತ ಸಹಾಯಕರು.
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.